ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ - ಇತರೆ ರಾಜ್ಯಗಳ ವರದಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ    ದಿನಾಂಕ : DATE : 10/6/2020

# ಮೂರು ರಾಜ್ಯಗಳಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆ ರದ್ದು

ವಿ.ವಾ.10.6.20

**ನವದೆಹಲಿ:** ಕರೊನಾ ಸೋಂಕಿನ ಹಿನ್ನಲೆಯಲ್ಲಿ ತೆಲಂಗಾಣ, ತಮಿಳುನಾಡು ಮತ್ತು ಪುದುಚೆರಿಗಳಲ್ಲಿ 10ನೇ ತರಗತಿ ವಿದ್ಯಾರ್ಥಿಗಳನ್ನು ತ್ರೈಮಾಸಿಕ, ಅರ್ಧವಾರ್ಷಿಕ ಪರೀಕ್ಷೆ ಮತ್ತು ಹಾಜರಾತಿ ಆಧರಿಸಿ ಮುಂದಿನ ತರಗತಿಗೆ ತೇರ್ಗಡೆ ಮಾಡಲು ನಿರ್ಧರಿಸಲಾಗಿದೆ.


ಸಾಂದರ್ಭಿಕ ಚಿತ್ರ

ತಮಿಳುನಾಡಿನಲ್ಲಿ 9 ಲಕ್ಷಕ್ಕೂ ಹೆಚ್ಚಿನ ವಿದ್ಯಾರ್ಥಿಗಳು 10ನೇ ತರಗತಿಯಲ್ಲಿದ್ದು, ಅವರೆಲ್ಲರನ್ನು ಮುಂದಿನ ತರಗತಿಗೆ ತೇರ್ಗಡೆ ಮಾಡಿರುವುದಾಗಿ ತಿಳಿಸಲಾಗಿದೆ. ಲಾಕ್‌ಡೌನ್ ಕಾರಣದಿಂದಾಗಿ ಮುಂದೂಡಲಾಗಿದ್ದ ಪರೀಕ್ಷೆ ಜೂನ್ 15ರಿಂದ ನಡೆಸಲು ನಿರ್ಧರಿಸಲಾಗಿತ್ತು. ಹೈಕೋರ್ಟ್ ಸೂಚನೆ ಮೇರೆಗೆ ಪಾಲಕರು ಮತ್ತು ಶಿಕ್ಷಕರೊಂದಿಗೆ ಮಂಗಳವಾರ ಸಭೆ ನಡೆಸಿ, ಪರೀಕ್ಷೆ ರದ್ದು ಮಾಡುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ತೆಲಂಗಾಣದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ರದ್ದು ಮಾಡಿರುವುದಾಗಿ ಮುಖ್ಯಮಂತ್ರಿ ಕೆ. ಚಂದ್ರಶೇಖರ ರಾವ್ ಸೋಮವಾರ ತಿಳಿಸಿದ್ದಾರೆ. 5.35 ಲಕ್ಷ ವಿದ್ಯಾರ್ಥಿಗಳಿಗೆ 6 ವಿಷಯಗಳ 11 ಪರೀಕ್ಷೆ ನಡೆಯಬೇಕಿತ್ತು. 3 ಪರೀಕ್ಷೆಗಳು ಮುಗಿಯುವಷ್ಟರಲ್ಲಿ ಲಾಕ್‌ಡೌನ್ ಜಾರಿಯಾಯಿತು. ಪುದುಚೆರಿಯಲ್ಲಿಯೂ ಪರೀಕ್ಷೆ ರದ್ದು ಮಾಡಿರುವುದಾಗಿ ರಾಜ್ಯ ಸರ್ಕಾರ ಘೋಷಣೆ ಮಾಡಿದೆ.